490 (786) ಶ್ರೀ ಖಾದರ್ ಯು.ಟಿ. (ಉಳ್ಳಾಲ) :- ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2002ರಲ್ಲಿ ಉಳ್ಳಾಲದಲ್ಲಿ ನಡೆದ ಗಲಭೆಗೆ ಕಾರಣಕರ್ತರಾಗಿದ್ದವರ ಹಾಗೂ ಅನಂತ ಕೊಲೆ ಪ್ರಕರಣದ ನಂತರ ಮೊಕದ್ದಮೆಯನ್ನು ಹಿಂದಕ್ಕೆ ಪಡೆಯಲು ಮತ್ತು ಎಂ.ಆರ್.ಪಿ.ಎಲ್. ವಿರೋಧಿ ಪ್ರತಿಭಟನೆ ಹಾಗೂ ಕೋಮು ಗಲಭೆಯನ್ನು ಹಿಂದಕ್ಕೆ ಪಡೆಯಲು ಆದೇಶಿಸಿದ್ದಕ್ಕೆ ಕಾರಣಗಳೇನು;

ಆ) ಉಳ್ಳಾಲದಲ್ಲಿ ಇತ್ತೀಚೆಗೆ ನಡೆದ ಉಪಚುನಾವಣೆ ಸಂದರ್ಭದಲ್ಲಿ ನಡೆದ ಗಲಭೆಯಲ್ಲಿ ಎಲ್ಲಾ ಜಾತಿ ವರ್ಗದ ಬಡವರು ಹಾಗೂ ದುಡಿಯುವ ಯುವಕರ ಮೇಲೆ ಮೊಕದ್ದಮೆ ಹೂಡಿದ್ದು, ಇವರ ಮುಂದಿನ ಜೀವನಕ್ಕೆ ಮಾರಕವಾಗುವುದರಿಂದ ಈ ಜನರ ಮೇಲಿರುವ ಮೊಕದ್ದಮೆಯನ್ನು ಸರ್ಕಾರ ಹಿಂದಕ್ಕೆ ಪಡೆಯಲು ಇರುವ ತೊಂದರೆ ಏನು?

ಶ್ರೀ ಎಂ.ಪಿ. ಪ್ರಕಾಶ್ (ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) 2002ನೇ ಇಸವಿಯಲ್ಲಿ ಉಳ್ಳಾಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಯಾವುದೇ ಕೋಮುಗಲಭೆ ಘಟನೆಗಳು ವರದಿಯಾಗಿರುವುದಿಲ್ಲ.

ಆ) 02 ಪ್ರಕರಣಗಳು ದಾಖಲಾಗಿ ತನಿಖೆಯಲ್ಲಿರುತ್ತವೆ. ಈ ಪ್ರಕರಣಗಳು ಹಿಂದಕ್ಕೆ ಪಡೆಯುವ ಕುರಿತು ಯಾವುದೇ ಪ್ರಸ್ತಾವನೆ ಇರುವುದಿಲ್ಲ.

491 (788) ಶ್ರೀ ಖಾದರ್ ಯು.ಟಿ. (ಉಳ್ಳಾಲ) :- ಮಾನ್ಯ ಒಳಾಡಳಿತ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರಿನಲ್ಲಿ ನಡೆದ ಕೋಮು ಗಲಭೆ ಬಗ್ಗೆ ಅಗರ್‌ವಾಲ್ ಸಮಿತಿಯನ್ನು ಸರ್ಕಾರ ನೇಮಿಸಿದ್ದು ಇದುವರೆಗೂ ಸಮಿತಿ ವರದಿಯನ್ನು ನೀಡಿಲ್ಲದಿರುವುದಕ್ಕೆ ಕಾರಣವೇನು;

ಆ) ಈ ಗಲಭೆಯಲ್ಲಿ ಎರಡು ಕೊಲೆಗಳು ನಡೆದಿದ್ದು ಸಿ.ಓ.ಡಿ. ತನಿಖೆ ನಡೆಯುತ್ತಿದ್ದು ಅದು ಯಾವ ಹಂತದಲ್ಲಿದೆ;